**<u>ಕರ್ನಾಟಕ ಸರ್ಕಾರದ ನಡವಳಿಗಳು</u>**

ವಿಷಯ: ಶ್ರೀಮತಿ ಅಧಿಶಾ ಚೌಧುರಿ, ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಇವರ ವೈದ್ಯಕೀಯ ವೆಚ್ಚ ಮರುಪಾವತಿಸುವ ಬಗ್ಗೆ.

ಓದಲಾಗಿದೆ: ಶ್ರೀಮತಿ ಅಧಿಶಾ ಚೌಧುರಿ, ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಇವರ ಮನವಿ ದಿನಾಂಕ 29.03.2016.

*****

ಶ್ರೀಮತಿ ಅಧಿಶಾ ಚೌಧುರಿ, IES, ಇವರು ನಿಯೋಜನೆ ಮೇಲೆ ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ ರಾಜ್ಯ ಯೋಜನಾ ಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಡಿಸೆಂಬರ್-2015 ರಿಂದ ಮಾರ್ಚ್-2016ರವರೆಗೆ ನಿಮ್ಹಾನ್ಸ್ ಆಸ್ಪತ್ರೆ ಬೆಂಗಳೂರು ಹಾಗೂ ಚಿನ್ಮಯ ಮಿಷನ್ ಆಸ್ಪತ್ರೆ, ಬೆಂಗಳೂರು ಇಲ್ಲಿ ಅನಾರೋಗ್ಯದ ನಿಮಿತ್ತ ಚಿಕಿತ್ಸೆ ಪಡೆದಿದ್ದು, ಚಿಕಿತ್ಸೆಗೆ ತಗುಲಿದ ಒಟ್ಟು ವೈದ್ಯಕೀಯ ವೆಚ್ಚ ರೂ.19,414.22 ಗಳನ್ನು ಮರುಪಾವತಿಸುವಂತೆ ಮೇಲೆ ಓದಲಾದ ಮನವಿಯಲ್ಲಿ ಕೋರಿರುತ್ತಾರೆ ಹಾಗೂ ಒಟ್ಟು ರೂ.19,414.22 ಗಳಿಗೆ ಬಿಲ್ಲನ್ನು ಸಲ್ಲಿಸಿರುತ್ತಾರೆ.

ಶ್ರೀಮತಿ ಅಧಿಶಾ ಚೌಧುರಿ, IES, ಇವರು ನಿಯೋಜನೆ ಮೇಲೆ ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ ರಾಜ್ಯ ಯೋಜನಾ ಮಂಡಳಿರವರು ಡಿಸೆಂಬರ್-2015 ರಿಂದ ಮಾರ್ಚ್-2016ರವರೆಗೆ ನಿಮ್ಹಾನ್ಸ್ ಆಸ್ಪತ್ರೆ ಬೆಂಗಳೂರು ಹಾಗೂ ಚಿನ್ಮಯ ಮಿಷನ್ ಆಸ್ಪತ್ರೆ, ಬೆಂಗಳೂರು ಇಲ್ಲಿ ಚಿಕಿತ್ಸೆ ಪಡೆದಿದ್ದು, ಇವುಗಳಲ್ಲಿ ನಿಮ್ಹಾನ್ಸ್ ಆಸ್ಪತ್ರೆಯು ಸ್ವಾಯತ್ತ ಸಂಸ್ಥೆಯಾಗಿದ್ದು, ಚಿನ್ಮಯ ಮಿಷನ್ ಆಸ್ಪತ್ರೆಯು ಸರ್ಕಾರದಿಂದ ಮಾನ್ಯತೆ ಪಡೆದ ಆಸ್ಪತ್ರೆಯಾಗಿರುವುದರಿಂದ ಕರ್ನಾಟಕ ಸರ್ಕಾರಿ ನೌಕರರ ವೈದ್ಯೋಪಚಾರ ನಿಯಮಗಳು 1963ರನ್ವಯ ಪರಿಶೀಲಿಸಿದ್ದು, ಸಿಜಿಹೆಚ್ಎಸ್ ದರಪಟ್ಟಿಯನ್ವಯ ಮರುಪಾವತಿಗೆ ಅಂಗೀಕಾರಾರ್ಹ ವೆಚ್ಚ ರೂ.11,214/-ಗಳನ್ನು ಶ್ರೀಮತಿ ಅಧಿಶಾ ಚೌಧುರಿ, IES, ನಿಯೋಜನೆ ಮೇಲೆ ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ ರಾಜ್ಯ ಯೋಜನಾ ಮಂಡಳಿ ರವರಿಗೆ ಮರುಪಾವತಿಸುವ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಪಿಡಿ 37 ಎಸ್‌ಪಿಬಿ 2016 ಬೆಂಗಳೂರು, ದಿನಾಂಕ:08.08.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಅಧಿಶಾ ಚೌಧುರಿ, IES, ನಿಯೋಜನೆ ಮೇಲೆ ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ರವರು ನಿಮ್ಹಾನ್ಸ್ ಆಸ್ಪತ್ರೆ, ಬೆಂಗಳೂರು ಹಾಗೂ ಚಿನ್ಮಯ ಮಿಷನ್ ಆಸ್ಪತ್ರೆ, ಬೆಂಗಳೂರು ಇಲ್ಲಿ ಡಿಸೆಂಬರ್-2015 ರಿಂದ ಮಾರ್ಚ್-2016ರವರೆಗೆ ಅನಾರೋಗ್ಯದ ನಿಮಿತ್ತ ಚಿಕಿತ್ಸೆ ಪಡೆದಿದ್ದು, ಚಿಕಿತ್ಸೆಗೆ ತಗುಲಿದ ವೆಚ್ಚದಲ್ಲಿ ಮರುಪಾವತಿಗೆ ಅಂಗೀಕಾರಾರ್ಹ ಮೊತ್ತ ರೂ.11,214/- (ಹನ್ನೊಂದು ಸಾವಿರದ ಎರಡು ನೂರ ಹದಿನಾಲ್ಕು ರೂಪಾಯಿಗಳು ಮಾತ್ರ) ಗಳನ್ನು ಶ್ರೀಮತಿ ಅಧಿಶಾ ಚೌಧುರಿ ಇವರಿಗೆ ಮರುಪಾವತಿಸಲು ಮಂಜೂರಾತಿ ನೀಡಿದೆ.

-----2

ಈ ವೆಚ್ಚವನ್ನು ರಾಜ್ಯ ಯೋಜನಾ ಮಂಡಳಿಯ ಆಯವ್ಯಯ ಲೆಕ್ಕಶೀರ್ಷಿಕೆ: "3451-00-101-4-00-021 (ವೈದ್ಯಕೀಯ ವೆಚ್ಚದ ಮರುಪಾವತಿ)" ರಡಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ.

ಪ್ರತಿಗೆ:

1) ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು- 560 001.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4) ಶ್ರೀಮತಿ ಅಧಿತಾ ಚೌಧುರಿ, ನಿರ್ದೇಶಕರು, DEA ರವರು ಮೊದಲು ನಿಯೋಜನೆ ಮೇಲೆ ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಬೆಂಗಳೂರು.
5) ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
6) ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
7) ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ.
8) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿ-1 & 2, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು (ಕಾಂಪೆಂಡಿಯಂಗಾಗಿ)
10) ಸಹಾಯಕ ಆಡಳಿತಾಧಿಕಾರಿ, ಎಸ್-3 ಶಾಖೆ, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ
11) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.